**PÀ£ÁðlPÀ CgÀtå E¯ÁSÉ**

**CgÀtå «ÃPÀëPÀgÀ ºÀÄzÉÝUÉ CfðÀ**

1. ¤ªÀä EwÃa£ ¥Á¸ï¥ÉÆmïð C¼ÀvÀzÀ ¨ÁªÀavæ CAn¹.

**CfðAiÀÄ£ÀÄß ¨sÀwð ªÀiÁqÀÄªÀ ¸ÀÆZÀ£ÉUÀ¼ÀÄ**

J) P£ÀßqÀ ¨ÁµÉAiÀÄ zÉ¥ï CxÀªÁ DAU¯ÁµÉAiÀÄ Capital CPÀëgÀUÀ¼À°è ¨sÀwð ªÀiÁqÀ¨ÃPÀÄ
©) AiÀiÁªÀÅzÃ CfðÀ ±ÀÄ®Ì EgÀÄªÀÅ¢® ºÁUÀÆ CfðAiÀÄ eÉÆv AiÀiÁªÀÅzÃ zÁR¯ÉU¼À£ÀÄß ¸À°è¸¨ÁgzÀÄ.
¹) ¸ÆP CAP t ªÀ£ÀÄß v ªÀiÁr
r) F CfðAiÀÄ£ÀÄß ªÀÄqZ¨Ãr, ¨ÁªÀavæ ¦£ÀÄß ºÁP¨Ãr ªÀÄvÀÄ ¸ZÀªÁVr.
E) £ÃªÀÄPÁw C¢¸ÆZ£AiÀÄ£ÀÄß N¢ Z£ÁV ªÀÄ£zÀlÄ ªÀiÁrPÆAqÀÄ CfðAiÀÄ£ÀÄß ¨sÀwð ªÀiÁqÀÄªÀÅzÀÄ.

2. C¨sÀyðAiÀÄ ¸À».

3. C¨sÀyðAiÀÄ º¸gÀÄ, vÀAzAiÀÄ º¸gÀÄ ªÀÄvÀÄ ¥Æ t ð CAZ «¼Á¸ (¦£ï PÆÃqï£ÆA¢U)

4. C¨sÀyðAiÀÄ º¸gÀÄ (DAU¯ÁµÉAiÀÄ CAPITAL CPÀëgÀUÀ¼À°è ¨sÀwð ªÀiÁqÀ¨ÃPÀÄ)

5 ªÆ¨Éʯï zÆgªÁt ¸ASÉå

6 d£À ¢£ÁAP — ¢£ / wAU¼ÀÄ / ªµð

7. °AU — ¥ÀÄgÀÄµ / ªÀÄ»¼

8. ¥ÀæUð — ¸ÁªÀiÁ£Àå ªÀUð / ¥j²µÀ eÁw / ¥j²µÀ ¥AUq / ¥ÀæUð-I / ¥ÀæUð-II(J) / ¥ÀæUð-II(©) / ¥ÀæUð-III(J) / ¥ÀæUð -III(©)

9. ¸ªÀÄv¼ «ÄÄ¸À Aw — ªÀiÁf ¸ÉÊ¤P / CAU«P® C¨sÀyð (PÀµgÆÃU¢Az UÀÄt ªÀÄÄR ºÆA¢zªÀjU ªÀiÁvæ) / AiÆÃd£Á ¤gÁ²æv / UÁæ«ÄÃt / P£ÀßqÀ ªÀiÁzÀåªÀÄ

10. Cgt¥ÀæzÉñÀPÀgÁV P¤µÀ 5 ªµðU¼ ¸Ãª ¸°¹ ¥ÀæÃv CgtåªÀæzÉñÀPÀgÁVAiÀÄÄ PvðªÀå ¤ªð»¸ÀÄwgÀÄ«gÁ — ºËzÀÄ / E®

11. C¨sÀyðAiÀÄÄ ªÀiÁf ¸ÉÊ¤PgÁVzÀÝ° ¸±¸ð ¥qU¼° ¸°¹z ¸ÃªÁ Cª¢ — ªµð / wAU¼ÀÄ / ¢£

12. Cgtåzº ªÁ¹¸Àª ¥j²µÀ ¥AUqzªgÃ — ºËzÀÄ / E®

13. Cgtåzº ªÁ¹¸Àª ¥j²µÀ ¥AUqzªgÁVzÀÝg, eÁwAiÀÄ º¸g£ÀÄß £ªÀÄÆ¢¹

14. 7£Ã vgUw vÃUðqAiÀiÁVgÀÄ«gÁ — ºËzÀÄ / E®

15. £ÃªÀÄPÁw °Tv ¥jÃPU DAiÀÄÄPÆAq ªÀiÁzÀåªÀÄ — P£ÀßqÀ / DAU

**WÉÆÃµÀuÉ** CfðAiÀÄ° £ªÀÄÆ¢¹gÀª J¯Á «ªgU¼À ¸vÀå ºÁUÀÆ ¥j¥Ætð ªÁVgÀvz. CfðAiÀÄ° AiÀiÁªÀÅzÃ v¥ÀÄ ªÀiÁ»w ¤ÃrgÀÄªÀÅzÀÄ PAqÀÄ §Az° £À£À CfðAiÀÄ£ÀÄß wgÀ¸ÀÌj¸ÀÄª Cx ªÁ £À£À£ÀÄß ¸Ãª¬ÄAz AiÀiÁªÀÅzÃ ªÀÄÄÄ£ÉÆÃ n¸z¤ÃqÀzÃ vvÀ§Az QæªÀÄ£¯ï PæªÀÄ PÉÊUÆ¼À®Ä E¯ÁSU C¢PÁg«zAiÀÄAzÀÄ CjwzÃ£. C®z, £Á£ÀÄ FªÀgU AiÀiÁªÀÅzÃ QæªÀÄ£¯ï ªÆPzªÀÄU¼° «ZÁguU²PU M¼¥n®ªÀzÀ zÀrÃPj¸ÀvÃ£.

¢£ÁAP:

**C¨sÀyðAiÀÄ ¸À».**

**ಕರ್ನಾಟಕ ಸರ್ಕಾರ**

**ಅರಣ್ಯ ಇಲಾಖೆ**

## ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ, ಮೈಸೂರು ವೃತ್ತ, ಮೈಸೂರು

# ಅಧಿಸೂಚನೆ

**ಸಂಖ್ಯೆ: ಎ2-ಸಿಬ್ಬಂದಿ-ನೇಮಕಾತಿ-ಸಿಆರ್-18/2011-12 ದಿನಾಂಕ 27-06-2011**

## ಅರಣ್ಯ ವೀಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ

****

ಅರಣ್ಯ ಇಲಾಖೆಯ ಮೈಸೂರು ವೃತ್ತ ವ್ಯಾಪ್ತಿಗೆ ಒಳಪಡುವ ಹುಣಸೂರು ವನ್ಯಜೀವಿ ವಿಭಾಗದಲ್ಲಿ 70 ಸಂಖ್ಯೆಯ ಅರಣ್ಯ ವೀಕ್ಷಕ ಹುದ್ದೆಗಳಿಗೆ ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2003 ರಂತೆ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ನಮೂನೆ ಹಾಗೂ ಅರ್ಜಿ ಭರ್ತಿ ಮಾಡುವ ವಿಧಾನದ ಸೂಚನೆಯನ್ನು ಈ ಅಧಿಸೂಚನೆಯೊಂದಿಗೆ ಅಡಕಗೊಳಿಸಿ ಪ್ರಕಟಿಸಲಾಗಿದೆ ಹಾಗೂ ಇಲಾಖಾ ವೆಬ್‌ಸೈಟ್: **www.karnatakaforest.gov.in** ನಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಪಡಿಸಲಾಗಿದೆ. ಅರ್ಜಿ ನಮೂನೆಯ ಮಾದರಿಯನ್ನು ಅರಣ್ಯ ಸಂರಕ್ಷಣಾಧಿಕಾರಿ, ಮೈಸೂರು ವೃತ್ತ, ಮೈಸೂರು ಮತ್ತು ಉಪ ಅರಣ್ಯ ಸಂರಕ್ಷಣಾಧಿಕಾರಿ, ಮೈಸೂರು ವಿಭಾಗ, ಮೈಸೂರು, ಹುಣಸೂರು ವನ್ಯಜೀವಿ ವಿಭಾಗ, ಹುಣಸೂರು ಇವರ ಕಚೇರಿಗಳಿಂದಲೂ ಪಡೆಯಬಹುದು. ಅಭ್ಯರ್ಥಿಗಳು ಈ ಅರ್ಜಿ ನಮೂನೆಯನ್ನು ಇಲಾಖಾ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅಥವಾ ಈ ಅಧಿಸೂಚನೆಯೊಂದಿಗೆ ಇರುವ ಅರ್ಜಿ ನಮೂನೆಯನ್ನು ಖಾಲಿ ಹಾಳೆಯಲ್ಲಿ ಪ್ರತ್ಯೇಕವಾಗಿ ಮುದ್ರಿಸಿ, ಮಾಹಿತಿಗಳನ್ನು ದಪ್ಪ ಅಕ್ಷರಗಳಲ್ಲಿ ಸ್ಪಷ್ಟವಾಗಿ ಬರೆದು / ಬೆರಳಚ್ಚು ಮಾಡಿ ಸಲ್ಲಿಸಬಹುದು. ಅರ್ಜಿ ನಮೂನೆಗಳು ಮಾರಾಟಕ್ಕೆ ಲಭ್ಯವಿರುವುದಿಲ್ಲ.

ಲಕೋಟೆಯ ಮೇಲೆ **"ಅರಣ್ಯ ವೀಕ್ಷಕ ಹುದ್ದೆಗೆ ಅರ್ಜಿ"** ಎಂದು ಸ್ಪಷ್ಟವಾಗಿ ನಮೂದಿಸಿರಬೇಕು. ಅರ್ಜಿಗಳನ್ನು ಅಂಚೆ ಮೂಲಕ ಅಥವಾ ಮುದ್ದಾಂ ಆಗಿ ಈ ಕೆಳಗೆ ತಿಳಿಸಿರುವ ವಿಳಾಸಕ್ಕೆ ಸಲ್ಲಿಸಬೇಕು.

**ಅರಣ್ಯ ಸಂರಕ್ಷಣಾಧಿಕಾರಿ**
**ಹಾಗೂ ಆಯ್ಕೆ ಪ್ರಾಧಿಕಾರ,**
**ಮೈಸೂರು ವೃತ್ತ, ಅರಣ್ಯ ಭವನ,**
**ಅಶೋಕಪುರಂ, ಮೈಸೂರು-570 008.**

**ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ 23-07-2011 ರಂದು ಅಪರಾಹ್ನ 2.30 ಗಂಟೆವರೆಗೆ ಆಗಿರುತ್ತದೆ.** ಒಂದು ವೇಳೆ ಅರ್ಜಿ ಸ್ವೀಕರಿಸುವ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ಕೆಲಸದ ದಿನವು ಅರ್ಜಿಯನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು. **ಅರ್ಜಿಯ ಜೊತೆಯಲ್ಲಿ ಯಾವುದೇ ದಾಖಲೆಗಳನ್ನು ಲಗತ್ತಿಸಬಾರದು ಹಾಗೂ ಸಲ್ಲಿಸಬಾರದು. ಅಂಚೆ ಮೂಲಕ ಅಥವಾ ಇನ್ನಿತರ ಯಾವುದೇ ವ್ಯವಸ್ಥೆಯ ಮೂಲಕ ಕೊನೆಯ ದಿನಾಂಕ ಹಾಗೂ ವೇಳೆಯ ನಂತರ ಸ್ವೀಕರಿಸಲಾಗುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.**

ನೇಮಕಾತಿಗಾಗಿ ಸಂಬಂಧಿಸಿದ ಎಲ್ಲಾ ರೀತಿಯ ಪರೀಕ್ಷೆಗಳ ದಿನಾಂಕ, ಸ್ಥಳ ಮತ್ತು ವೇಳೆಯನ್ನು ಅರ್ಹ ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ತಿಳಿಸಲಾಗುವುದು. ಅರ್ಹ ಅಭ್ಯರ್ಥಿಗಳಿಗೆ ನಿಗದಿತ ಪರೀಕ್ಷೆಗಳಿಗೆ ಹಾಜರಾಗುವ ಕುರಿತು ಪ್ರವೇಶ ಪತ್ರವನ್ನು ಅಂಚೆ ಮೂಲಕ ಕಳುಹಿಸಲಾಗುವುದು ಹಾಗೂ ಈ ಎಲ್ಲಾ ವಿವರಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಸಹ ಪ್ರಕಟಿಸಲಾಗುವುದು.

**1.0 ಅರಣ್ಯ ವೀಕ್ಷಕ ಹುದ್ದೆ:- ಒಟ್ಟು 70 ಹುದ್ದೆಗಳು.**

ವೇತನ ಶ್ರೇಣಿ: ರೂ.5200-100-6000-125-6500-150-7100-175-7800-200-8200

**1.1 ಹುಣಸೂರು ವನ್ಯಜೀವಿ ವಿಭಾಗದ 70 ಹುದ್ದೆಗಳ ಮೀಸಲಾತಿ ವರ್ಗೀಕರಣ:**

**1.2** ಹುಣಸೂರು ವನ್ಯಜೀವಿ ವಿಭಾಗ ವ್ಯಾಪ್ತಿಯಲ್ಲಿ ಬರುವ ಪೂರ್ಣ ಅಥವಾ ಭಾಗಶಃ ತಾಲೂಕು ಪ್ರದೇಶಗಳಲ್ಲಿ 1ನೇ ತರಗತಿಯಿಂದ 7ನೇ ತರಗತಿಯವರೆಗೆ ಅಭ್ಯಸಿಸಿರುವ ಹಾಗೂ ಈ ವಿಭಾಗ ವ್ಯಾಪ್ತಿಯ ಅರಣ್ಯಗಳಲ್ಲಿ ವಾಸಿಸುವ ಪರಿಶಿಷ್ಠ ಪಂಗಡಕ್ಕೆ ಸೇರಿದ ಬುಡಕಟ್ಟು ಜನಾಂಗಗಳಾದ ಜೇನು ಕುರುಬ, ಕಾಡು ಕುರುಬ, ಹಕ್ಕಿಪಿಕ್ಕಿ, ಸೋಲಿಗ, ಸೋಲಿಗರು, ಯರವ, ಗೌಡ್ಲು, ಇರುಳರ್, ಇರುಲಿಗಾ, ಕೊರಗಾ, ಮೆಲಕುಡಿ, ಮಲೈಕುಡಿ, ಮಲೇರು, ಮೇದಾ ಮತ್ತು ತೋಡ ಪಂಗಡಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಒಟ್ಟು 70 ಹುದ್ದೆಗಳ ಪೈಕಿ ಶೇಕಡಾ 50 ಭಾಗದ ಹುದ್ದೆಗಳನ್ನು ಅಂದರೆ **35 ಹುದ್ದೆಗಳನ್ನು** ಈ ಮೇಲ್ಕಾಣಿಸಿದ ಪಂಗಡದ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿದೆ.

**1.3** ಒಟ್ಟು 70 ಹುದ್ದೆಗಳ ಪೈಕಿ ಶೇಕಡಾ 50 ಭಾಗದ ಹುದ್ದೆಗಳನ್ನು ಅಂದರೆ **35 ಹುದ್ದೆಗಳನ್ನು** ಈ ಕೆಳಕಂಡಂತೆ ವರ್ಗೀಕರಿಸಲಾಗಿದೆ.

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಅಂಗವಿಕಲ ಅಭ್ಯರ್ಥಿ (ಕುಷ್ಟರೋಗದಿಂದ ಗುಣ ಮುಖರಾಗಿರುವವರು ಮಾತ್ರ) | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಪರಿಶಿಷ್ಟ ಜಾತಿ | 3 | – | – | – | 2 | – | **5** |
| ಸಾಮಾನ್ಯ ಅರ್ಹತೆ | 9 | 2 | 1 | 1 | 4 | 1 | **18** |
| ಪರಿಶಿಷ್ಟ ಪಂಗಡ | 1 | – | – | – | – | – | **1** |
| ಪ್ರವರ್ಗ–I | 1 | – | – | – | – | – | **1** |
| ಪ್ರವರ್ಗ–II(ಎ) | 3 | – | – | – | 2 | – | **5** |
| ಪ್ರವರ್ಗ–II(ಬಿ) | 2 | – | – | – | – | – | **2** |
| ಪ್ರವರ್ಗ–III(ಎ) | 1 | – | – | – | – | – | **1** |
| ಪ್ರವರ್ಗ–III(ಬಿ) | 2 | – | – | – | – | – | **2** |
| **ಒಟ್ಟು:** | **22** | **2** | **1** | **1** | **8** | **1** | **35** |

**ವಿಶೇಷ ಸೂಚನೆ:–** ಸರ್ಕಾರಿ ಅಧಿಸೂಚನೆ ಸಂಖ್ಯೆ ಡಿಪಿಎಆರ್ 52 ಎಸ್‌ಆರ್‌ಆರ್ 99 ದಿನಾಂಕ 29–11–2002ರ ಪ್ರಕಾರ ಅರಣ್ಯ ವೀಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಅಭ್ಯರ್ಥಿಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಅಂಗವಿಕಲ ಅಭ್ಯರ್ಥಿಗಳಿಗೆ ಮೀಸಲಾಗಿರುವ ಮೀಸಲಾತಿಯಡಿಯಲ್ಲಿ ಕುಷ್ಠರೋಗದಿಂದ ಗುಣಮುಖರಾಗಿರುವ ಅಭ್ಯರ್ಥಿಗಳನ್ನು ಮಾತ್ರ ಭರ್ತಿ ಮಾಡಲು ಅವಕಾಶವಿರುತ್ತದೆ.

"ಕುಷ್ಠರೋಗದಿಂದ ಗುಣಮುಖರಾಗಿರುವವರು (leprosy cured)" ಎಂದರೆ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರಲ್ಲಿ ಅರ್ಥೈಸಿರುವಂತಾಗಿದೆ. ಈ ಪದದ ಅರ್ಥ ವಿವರಣೆ ಈ ಕೆಳಕಂಡಂತಿದೆ.

Leprosy cured means any person who has been cured of leprosy but is suffering from

(i) loss of sensation in hands or feet as well as loss of sensation and paresis in the eye and eye-lid but with no manifest deformity;

(ii) manifest deformity and paresis but having sufficient mobility in their hands and feet to enable them to engage in normal economic activity;

(iii) extreme physical deformity as well as advanced age which prevents him from undertaking any gainful occupation;

and the expression "leprosy cured" shall be construed accordingly.

**2.0 ಅರ್ಹತೆ ಮತ್ತು ನಿಬಂಧನೆಗಳು:**

**2.1 ವಿದ್ಯಾರ್ಹತೆ:** ಅಧಿಸೂಚನೆಯ ದಿನಾಂಕದೊಳಗೆ ಅಭ್ಯರ್ಥಿಯು 7ನೇ ತರಗತಿಯಲ್ಲಿ ತೇರ್ಗಡೆ ಹೊಂದಿರಬೇಕು.

**3.0 ವಯೋಮಿತಿ:** ಅಧಿಸೂಚನೆಯ ದಿನಾಂಕಕ್ಕೆ ಅಭ್ಯರ್ಥಿಯು **ಕನಿಷ್ಠ 18 ವರ್ಷ** ವಯಸ್ಸನ್ನು ಪೂರೈಸಿರತಕ್ಕದ್ದು.

ಅಧಿಸೂಚನೆಯ ದಿನಾಂಕಕ್ಕೆ ಗರಿಷ್ಠ ವಯೋಮಿತಿ ವಿವರಗಳು ಕೆಳಗಿನಂತಿದೆ:–

**3.1**

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–I | ಗರಿಷ್ಠ ವಯೋಮಿತಿ 33 ವರ್ಷಗಳು |
| ಪ್ರವರ್ಗ IIಎ, IIಬಿ, IIIಎ, IIIಬಿ | ಗರಿಷ್ಠ ವಯೋಮಿತಿ 32 ವರ್ಷಗಳು |
| ಸಾಮಾನ್ಯ ಅರ್ಹತೆ | ಗರಿಷ್ಠ ವಯೋಮಿತಿ 30 ವರ್ಷಗಳು |

**3.2**

| | |
|---|---|
| **ಅರಣ್ಯ ಪ್ರೇರಕರಿಗೆ ವಯೋಮಿತಿ:** ಅಧಿಸೂಚನೆ ದಿನಾಂಕಕ್ಕೆ ಕನಿಷ್ಠ 5 ವರ್ಷಗಳ ಸೇವೆಯನ್ನು ಅರಣ್ಯ ಪ್ರೇರಕರಾಗಿ ಪೂರೈಸಿದ್ದು ಹಾಗೂ ಪ್ರಸ್ತುತ ಅರಣ್ಯ ಪ್ರೇರಕರಾಗಿ ಸೇವೆಯಲ್ಲಿ ಮುಂದುವರೆದಿದ್ದಲ್ಲಿ ಮಾತ್ರ ಕೆಳಗಿನ ಗರಿಷ್ಠ ವಯೋಮಿತಿ ಅನ್ವಯವಾಗುವುದು. | |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ– I | ಗರಿಷ್ಠ ವಯೋಮಿತಿ 43 ವರ್ಷಗಳು |
| ಪ್ರವರ್ಗ IIಎ, IIಬಿ, IIIಎ, IIIಬಿ | ಗರಿಷ್ಠ ವಯೋಮಿತಿ 42 ವರ್ಷಗಳು |
| ಸಾಮಾನ್ಯ ಅರ್ಹತೆ | ಗರಿಷ್ಠ ವಯೋಮಿತಿ 40 ವರ್ಷಗಳು |

**3.3**

| | |
|---|---|
| <u>ಮಾಜಿ ಸೈನಿಕರಿಗೆ ವಯೋಮಿತಿ:</u> | ಸಶಸ್ತ್ರ ಪಡೆಗಳಲ್ಲಿ ಸೇವೆ ಸಲ್ಲಿಸಿ ನಿಯಮಾನುಸಾರ ನಿವೃತ್ತಿ / ಡಿಮೊಬಿಲೈಜೆಷನ್ (Demobilisation) ಅಥವಾ ರಿಟ್ರೆಂಚ್‌ಮೆಂಟ್ (Retrenchment) ಹೊಂದಿದ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅವರು ಯಾವ ಪ್ರವರ್ಗಕ್ಕೆ ಸೇರಿರುತ್ತಾರೆಯೊ ಆ ಪ್ರವರ್ಗಕ್ಕೆ ಮೇಲಿನ ಕ್ರಮ ಸಂಖ್ಯೆ: **3.1**ರಲ್ಲಿ ನಿಗದಿಪಡಿಸಿದ ಗರಿಷ್ಠ ವಯೋಮಿತಿಗೆ ಅವರು ಸಶಸ್ತ್ರ ಪಡೆಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ ಮೂರು 3 ವರ್ಷ ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು. |

**ವಿವರಣೆ:** **"ಮಾಜಿ ಸೈನಿಕ"** ಎಂದರೆ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ಅರ್ಥೈಸಿರುವಂತಾಗಿದೆ. ಈ ಪದದ ಅರ್ಥ ವಿವರಣೆ ಈ ಕೆಳಕಂಡಂತಿದೆ:–

ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 2(1)(**i**):

<u>**"Ex-Serviceman"**</u> <u>means</u> a person, who has served in any rank (whether as a combatant or as non-combatant) in the regular <u>Army, Navy and Air Force of the Union</u> but does not include a person who has served in the Defence Security Corps, the General Reserve Engineering Force, the Lok Sahayak Sena and the Para Military Force; and

(a) who has retired from such service after earning his pension; or

(b) who has been released from such service on medical grounds attributable to military service or circumstances beyond his control and awarded medical or other disability pension; or

(c) who has been released otherwise than on his own request from such service as a result of reduction in establishment; or

(d) who has been released from such service after completing the specific period of engagement otherwise than at his own request or by way of dismissal or discharge on account of misconduct or inefficiency and has been given a gratuity;

and includes personnel of the Territorial Army of the following categories, namely:-

(i) pension holders for continuous embodied service;

(ii) persons with disability attributable to military service; and

(iii) gallantry award winners.

Explanation: The persons serving in the armed forces of the union, who on retirement from service, would come under the category of "Ex-Serviceman" may be permitted to apply for re-employment one year before the completion of the specified terms of engagement and avail themselves of all concessions available to ex-servicemen, but shall not be appointed to a State Civil Service or Post until they are permitted to leave the uniform.

## 4.0 ಅರ್ಜಿ ಸಲ್ಲಿಸುವ ವಿಧಾನ

ನಿಗದಿತ ನಮೂನೆಯಲ್ಲಿರುವ ಅರ್ಜಿಯನ್ನು ಸರಿಯಾಗಿ, ಸ್ಪಷ್ಟವಾಗಿ ಮತ್ತು ಪೂರ್ಣವಾಗಿ ಭರ್ತಿ ಮಾಡಿ, ಭರ್ತಿ ಮಾಡಿದ ಅರ್ಜಿಯನ್ನು ಈ ಮೇಲೆ ತಿಳಿಸಿದ ವಿಳಾಸಕ್ಕೆ ಅಂಚೆ ಮುಖಾಂತರ ಅಥವಾ ಮುದ್ದಾಂ ಆಗಿ ಸಲ್ಲಿಸುವುದು. ಅರ್ಜಿಯ ಜೊತೆಗೆ ಯಾವುದೇ ಮೂಲ/ನಕಲು/ಜೆರಾಕ್ಸ್ ದಾಖಲಾತಿಗಳು, ಪ್ರಮಾಣ ಪತ್ರಗಳು, ಇತ್ಯಾದಿಗಳನ್ನು ಸಲ್ಲಿಸಬೇಕಾಗಿರುವುದಿಲ್ಲ. ಆದರೆ ಅಭ್ಯರ್ಥಿಯು ನಿಗದಿತ ನಮೂನೆಯಲ್ಲಿರುವ ಅರ್ಜಿಯನ್ನು ಭರ್ತಿ ಮಾಡುವ ವೇಳೆಗೆ ಸಂಬಂಧಿಸಿದ ಪ್ರಾಧಿಕಾರಗಳಿಂದ ಅವಶ್ಯಕವಿರುವ ಎಲ್ಲಾ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪಡೆದುಕೊಂಡು ಸದರಿ ಮೂಲ ದಾಖಲೆ/ಪ್ರಮಾಣ ಪತ್ರಗಳಲ್ಲಿರುವ ಮಾಹಿತಿಯನ್ನು ಸರಿಯಾಗಿ, ಸ್ಪಷ್ಟವಾಗಿ ಮತ್ತು ಸಮರ್ಪಕವಾಗಿ ನಿಗದಿತ ಅರ್ಜಿಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು. ಇತರೆ ನಮೂನೆಗಳಲ್ಲಿ ಭರ್ತಿ ಮಾಡಿ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಮತ್ತು ಆಯ್ಕೆಗೆ ಪರಿಗಣಿಸುವುದಿಲ್ಲ.

## 5.0 ಸ್ವೀಕೃತ ಅರ್ಜಿಗಳ ಪರಾಮರ್ಶೆ/ನೇಮಕಾತಿ ವಿಧಾನ

ಕರ್ನಾಟಕ ಅರಣ್ಯ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು, 2003ರ ಅನ್ವಯ ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಾನುಸಾರ ಅರಣ್ಯ ವೀಕ್ಷಕ ಹುದ್ದೆಗೆ ಮೀಸಲಾತಿ ವರ್ಗೀಕರಣ ಮಾಡಲಾಗಿದೆ. ಸ್ವೀಕರಿಸಲಾಗುವ ಅರ್ಜಿಗಳಲ್ಲಿ ಭರ್ತಿ ಮಾಡಿರುವ ಮಾಹಿತಿ/ವಿವರಗಳ ಆಧಾರದ ಅನ್ವಯ ಅರ್ಹ ಅಭ್ಯರ್ಥಿಗಳಿಗೆ ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳಿಗೆ ಸೂಚಿತ ದಿನಾಂಕದಂದು ಹಾಜರಾಗಲು ತಿಳಿಸಲಾಗುವುದು. ಸದರಿ ಸೂಚಿತ ದಿನಾಂಕದಂದು ಅರ್ಹ ಅಭ್ಯರ್ಥಿಗಳು ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಶೀಲನೆಗೆ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಪ್ರಾದೇಶಿಕ ಪರೀಕ್ಷಕರ ಎದುರು ಹಾಜರುಪಡಿಸಬೇಕು.

ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆಯಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿ/ವಿವರಗಳಿಗೆ ಪೂರಕ ಮತ್ತು ಸರಿಯಾದ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಹಾಜರುಪಡಿಸಿದ ಅಭ್ಯರ್ಥಿಗಳು ಮಾತ್ರ ಶಾರೀರಿಕ ಮಾನದಂಡದ ಕುರಿತು ನಿಗದಿಪಡಿಸಿದ ದೈಹಿಕ ತಾಳ್ವಿಕೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದವರು ಮಾತ್ರ ಮುಂದಿನ ಹಂತದ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ದೇಹದಾರ್ಢ್ಯತೆ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ. ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ಲಿಖಿತ ಪರೀಕ್ಷೆಗೆ ಹಾಜರಾಗಲು ಅರ್ಹರಾಗುತ್ತಾರೆ. ಆಯಾ ದಿನಗಳಂದು ನಡೆಯುವ ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳ ಫಲಿತಾಂಶವನ್ನು ಆಯಾ ದಿನದಂದು ನೇಮಕಾತಿ ಪ್ರಾಧಿಕಾರವು ಆಯಾ ಪರೀಕ್ಷಾ ಕೇಂದ್ರದಲ್ಲಿ ಪ್ರಕಟಪಡಿಸಲಾಗುವುದು.

## 6.0 ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ, ದೇಹದಾರ್ಢ್ಯತೆ, ಮತ್ತು ಲಿಖಿತ ಪರೀಕ್ಷೆಗಳು:

ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ, ದೈಹಿಕ ತಾಳ್ವಿಕೆ, ದೈಹಿಕ ಕಾರ್ಯ ಸಮರ್ಥತೆ, ದೇಹದಾರ್ಢ್ಯತೆ ಮತ್ತು ಲಿಖಿತ ಪರೀಕ್ಷೆಗಳನ್ನು ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ನೇಮಕಾತಿ ಪ್ರಾಧಿಕಾರದಿಂದ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಸೂಚಿತ ದಿನಾಂಕಗಳಂದು ನಡೆಸಲಾಗುವುದು.

### 6.1 ಮೂಲ ದಾಖಲೆ/ಪ್ರಮಾಣ ಪತ್ರಗಳ ಪರಿಶೀಲನೆ:

ಅರ್ಹ ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿ/ವಿವರಗಳಿಗೆ ಪೂರಕವಾಗಿ ವಯಸ್ಸು, (ಜನ್ಮ ದಿನಾಂಕ ತಿಳಿಯಲು ಅಂಕಪಟ್ಟಿ ಆಥವಾ ಶಾಲಾ ದಾಖಲಾತಿ ಪ್ರಮಾಣ ಪತ್ರಗಳು) ಶೈಕ್ಷಣಿಕ ಅರ್ಹತೆ, ಮೀಸಲಾತಿ, ಇತ್ಯಾದಿ ಬಗ್ಗೆ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಸೂಚಿತ ದಿನಾಂಕದಂದು ಸಂಬಂಧಿಸಿದ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ನೇಮಕಾತಿ ಪ್ರಾಧಿಕಾರ ಇವರ ಎದುರು ಪರಿಶೀಲನೆಗೆ ಕಡ್ಡಾಯವಾಗಿ ಹಾಜರುಪಡಿಸಬೇಕು. ಸದರಿ ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಹಾಜರುಪಡಿಸಲು ಯಾವುದೇ ಕಾರಣಕ್ಕೂ ಮತ್ತು ಯಾವುದೇ ಸನ್ನಿವೇಶದಲ್ಲಿಯೂ ಕಾಲ ವಿಸ್ತರಣೆ ನೀಡಲಾಗುವುದಿಲ್ಲ. ಅಭ್ಯರ್ಥಿಯು ತನ್ನ ಅರ್ಜಿ ನಮೂನೆಯಲ್ಲಿ ನಮೂದಿಸಿರುವ ಮಾಹಿತಿ/ವಿವರಗಳನ್ನು ನಿಯಮಾನುಸಾರ ಪರಿಗಣಿಸಲಾಗುವುದು. ಒಂದು ವೇಳೆ ನಮೂದಿಸಿರುವ ಮಾಹಿತಿಗೆ ವ್ಯತಿರಿಕ್ತ ದಾಖಲೆ/ಪ್ರಮಾಣ ಪತ್ರಗಳನ್ನು ಸಲ್ಲಿಸಿದಲ್ಲಿ ಅಂತಹ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಗಣನೆಗೆ ತೆಗೆದುಕೊಂಡು ಬದಲಾವಣೆ ಮಾಡಲಾಗುವುದಿಲ್ಲ. ಮೂಲ ದಾಖಲೆ/ಪ್ರಮಾಣ ಪತ್ರಗಳನ್ನು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸದ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಹಾಗೂ ಅವರನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

6.2 **ದೈಹಿಕ ತಾಳ್ವಿಕೆ ಪರೀಕ್ಷೆ:-**

| | | |
|---|---|---|
| ಪುರುಷ ಅಭ್ಯರ್ಥಿಗಳಿಗೆ : | 1600 ಮೀಟರ್ ಓಟ | 06 ನಿಮಿಷಗಳ ಅವಧಿಯಲ್ಲಿ ಪೂರೈಸಬೇಕು. |
| ಮಹಿಳಾ ಅಭ್ಯರ್ಥಿಗಳಿಗೆ : | 1000 ಮೀಟರ್ ಓಟ | 05 ನಿಮಿಷಗಳ ಅವಧಿಯಲ್ಲಿ ಪೂರೈಸಬೇಕು. |

ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳನ್ನು ಮಾತ್ರ ಮುಂದಿನ ಹಂತದ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗೆ ಪರಿಗಣಿಸಲಾಗುವುದು. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

**6.3 ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆ:-**

| ಕ್ರ. ಸಂ. | ಐಟಂ | ಅರ್ಹತಾ ಸಮಯ ಮತ್ತು ಕ್ರಮಿಸಬೇಕಾದ ದೂರ | |
|---|---|---|---|
| | | **ಪುರುಷ ಅಭ್ಯರ್ಥಿಗಳಿಗೆ** | **ಮಹಿಳಾ ಅಭ್ಯರ್ಥಿಗಳಿಗೆ** |
| 1 | 100 ಮೀಟರ್ ಓಟ | 15 ಸೆಕೆಂಡುಗಳು | 18.5 ಸೆಕೆಂಡುಗಳು |
| 2 | ಎತ್ತರ ಜಿಗಿತ | 1.20 ಮೀಟರ್ | 0.90 ಮೀಟರ್ |
| 3 | ಉದ್ದ ಜಿಗಿತ | 3.80 ಮೀಟರ್ | 2.50 ಮೀಟರ್ |
| 4 | ಶಾಟ್‌ಪುಟ್ | 5.60 ಮೀಟರ್ | 3.76 ಮೀಟರ್ |
| 5(ಎ) | 800 ಮೀಟರ್ ಓಟ | 2 ನಿಮಿಷ 50 ಸೆಕೆಂಡುಗಳು | --- |
| 5(ಬಿ) | 200 ಮೀಟರ್ ಓಟ | --- | 40 ಸೆಕೆಂಡುಗಳು |

ಈ ಮೇಲಿನ 5 ವಿವಿಧ ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಗಳ ಪೈಕಿ ಕನಿಷ್ಠ 3 ಪರೀಕ್ಷೆಗಳಲ್ಲಿ ಕಡ್ಡಾಯವಾಗಿ ತೇರ್ಗಡೆ ಹೊಂದಬೇಕು. ದೈಹಿಕ ಕಾರ್ಯ ಸಮರ್ಥತೆ ಪರೀಕ್ಷೆಯಲ್ಲಿ ಅನರ್ಹರಾದ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

**6.4 ದೇಹದಾರ್ಢ್ಯತೆ ಪರೀಕ್ಷೆ:**

**ಶಾರೀರಿಕ ಮಾನದಂಡಗಳು:** ಶಾರೀರಿಕ ಮಾನದಂಡಗಳನ್ನು ಈ ಕೆಳಗಿನಂತೆ ನಿಗದಿಪಡಿಸಲಾಗಿದೆ.

| **ಪುರುಷ ಅಭ್ಯರ್ಥಿಗಳಿಗೆ:** | | |
|---|---|---|
| **ದೇಹದಾರ್ಢ್ಯತೆ** | **ಇತರೆ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ** | **ಕ್ರಸಂ. 1.2 ರಲ್ಲಿ ಹೇಳಿರುವ ಅರಣ್ಯಗಳಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ ಬುಡಕಟ್ಟು ಜನಾಂಗದ ಅಭ್ಯರ್ಥಿಗಳಿಗೆ** |
| ಎತ್ತರ: | ಕನಿಷ್ಠ 163 ಸೆ.ಮೀ. | ಕನಿಷ್ಠ 152 ಸೆ.ಮೀ. |
| ಎದೆ ಸುತ್ತಳತೆ: | ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 79 ಸೆ.ಮೀ. | ಸಾಮಾನ್ಯ ಸ್ಥಿತಿಯಲ್ಲಿ ಕನಿಷ್ಠ 74 ಸೆ.ಮೀ. |
| ಎದೆ ಕನಿಷ್ಠ ಹಿಗ್ಗುವಿಕೆ: | 5 ಸೆ.ಮೀ. | 5 ಸೆ.ಮೀ. |

| **ಮಹಿಳಾ ಅಭ್ಯರ್ಥಿಗಳಿಗೆ:** | | |
|---|---|---|
| **ದೇಹದಾರ್ಢ್ಯತೆ** | **ಇತರೆ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ** | **ಕ್ರಸಂ. 1.2 ರಲ್ಲಿ ಹೇಳಿರುವ ಅರಣ್ಯಗಳಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ ಬುಡಕಟ್ಟು ಜನಾಂಗದ ಅಭ್ಯರ್ಥಿಗಳಿಗೆ** |
| ಎತ್ತರ: | ಕನಿಷ್ಠ 150 ಸೆ.ಮೀ. | ಕನಿಷ್ಠ 145 ಸೆ.ಮೀ. |
| ಎದೆ ಸುತ್ತಳತೆ: | ಅನ್ವಯಿಸುವುದಿಲ್ಲ | ಅನ್ವಯಿಸುವುದಿಲ್ಲ |
| ಕನಿಷ್ಠ ತೂಕ: | 40 ಕೆ.ಜಿ. | 38 ಕೆ.ಜಿ. |

**6.5 ಈ ಕೆಳಕಂಡ ದೈಹಿಕ ನ್ಯೂನತೆಗಳನ್ನು ಹೊಂದಿರುವವರು ಆಯ್ಕೆಗೆ ಅನರ್ಹರು:–**

1. ತಾಗು ಮಂಡಿಗಳು (knock knees)
2. ಬಾಗಿದ ಕಾಲುಗಳು (Bow legs)
3. ಚಪ್ಪಟೆ ಪಾದ (Flat feet)
4. ನರ ಊತವಿರುವವರು (Varicose Veins)
5. ಮಾತನಾಡಲು ಮತ್ತು ಕೇಳುವ ಸಾಮರ್ಥ್ಯದಲ್ಲಿ ತೊಡಕು (impaediment in speech and hearing)
6. ಪುರುಷ ಅಭ್ಯರ್ಥಿಗಳಿಗೆ ಅಂಡವಾಯು (hydrocele in men)
7. ಬಣ್ಣ ಕುರುಡು/ಇರುಳು ಕುರುಡು (vision/colour blindness/night blindness)

**6.6 ದೃಷ್ಟಿ ಸಾಮರ್ಥ್ಯ**

ಅಭ್ಯರ್ಥಿಗಳು ಈ ಕೆಳಗೆ ನಿಗದಿಪಡಿಸಿರುವ ದೃಷ್ಟಿ ಸಾಮರ್ಥ್ಯವನ್ನು ಕನ್ನಡಕ ಸಹಿತ ಅಥವಾ ಕನ್ನಡಕ ರಹಿತ ಕಡ್ಡಾಯವಾಗಿ ಹೊಂದಿರಬೇಕು ಹಾಗೂ ದೃಷ್ಟಿ ಸಾಮರ್ಥ್ಯ ಕುರಿತು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

| ದೂರ ದೃಷ್ಟಿ (Distant vision) | | | ಸಮೀಪ ದೃಷ್ಟಿ (Near vision) | | |
|---|---|---|---|---|---|
| ದೋಷರಹಿತ ಕಣ್ಣು (Better eye) | ಅಥವಾ | ದೋಷಪೂರಿತ ಕಣ್ಣು (Worse eye) | ದೋಷರಹಿತ ಕಣ್ಣು (Better eye) | ಅಥವಾ | ದೋಷಪೂರಿತ ಕಣ್ಣು (Worse eye) |
| 6/6 ಮೀಟರ್ | ಅಥವಾ | 6/9 ಮೀಟರ್ | 0/6 ಮೀಟರ್ | ಅಥವಾ | 0/8 ಮೀಟರ್ |

ಪ್ರತಿ ಕಣ್ಣು ಸಂಪೂರ್ಣ ದೃಷ್ಟಿ ಹೊಂದಿರಬೇಕು. ವರ್ಣಾಂಧತೆ, ಮೆಳ್ಳೆಗಣ್ಣು ಅಥವಾ ಯಾವುದೇ ಕಣ್ಣಿನ ಅಥವಾ ರೆಪ್ಪೆಯ ವಿಕೃತ ಸ್ಥಿತಿಯನ್ನು ಅನರ್ಹತೆ ಎಂದು ಪರಿಗಣಿಸಲಾಗುವುದು.

**6.7 ಶ್ರವಣಶಕ್ತಿ**

ಅಭ್ಯರ್ಥಿಗಳ ಶ್ರವಣ ಶಕ್ತಿಯನ್ನು ಪರೀಕ್ಷಿಸಲು ಈ ಕೆಳಕಂಡ ಪರೀಕ್ಷೆಗಳನ್ನು ನಡೆಸಲಾಗುವುದು.

1. ರಿನ್ನರ್ಸ್ ಟೆಸ್ಟ್
2. ವೆಬ್ಬರ್ಸ್ ಟೆಸ್ಟ್
3. ಟೆಸ್ಟ್ ಫಾರ್ ವರ್ಟಿಗೋ

ಮೇಲಿನ ಪರೀಕ್ಷೆಗಳಲ್ಲಿ ಯಾವುದಾದರೂ ಶ್ರವಣ ದೋಷವಿದೆಯೆಂದು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಗೆ ಅನರ್ಹರಾಗುತ್ತಾರೆ.

**ಈ ಎಲ್ಲಾ ಹಂತದ ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳು ಮಾತ್ರ ಮುಂದಿನ ಹಂತದ ಲಿಖಿತ ಪರೀಕ್ಷೆಗೆ ಹಾಜರಾಗಲು ಅರ್ಹತೆ ಪಡೆಯುತ್ತಾರೆ.**

**7.1 ಲಿಖಿತ ಪರೀಕ್ಷೆ:**

ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯು ನೂರು (100) ಅಂಕಗಳದ್ದಾಗಿದ್ದು, ಅರುವತ್ತು (60) ನಿಮಿಷಗಳ ಅವಧಿಯಲ್ಲಿ ಉತ್ತರಿಸಬೇಕಾಗಿದೆ. ಪ್ರಶ್ನೆ ಪತ್ರಿಕೆಯು ಬಹು ಆಯ್ಕೆ (objective multiple choice) ಮಾದರಿಯದಾಗಿದ್ದು, ಇದು ಪ್ರಾಥಮಿಕ ಸಾಮಾನ್ಯ ಜ್ಞಾನ ಹಾಗೂ ಪ್ರಾಥಮಿಕ ಅಂಕಗಣಿತ ವಿಷಯವನ್ನು ಒಳಗೊಂಡಿರುತ್ತದೆ.

**7.2 ವಿಶೇಷ ಸೂಚನೆಗಳು:–**

**(1) ಅರಣ್ಯ ವೀಕ್ಷಕ ಹುದ್ದೆಯ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿರುವ ಎಲ್ಲಾ ವೃತ್ತಗಳಲ್ಲಿ ಒಂದೇ ದಿನಾಂಕ ಮತ್ತು ಒಂದೇ ಸಮಯದಲ್ಲಿ ನೇಮಕಾತಿಗೆ ಸಂಬಂಧಿಸಿದ ಎಲ್ಲಾ ಪರೀಕ್ಷೆಗಳನ್ನು ನಡೆಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಯಾವುದಾದರೂ ಒಂದೇ ವೃತ್ತಕ್ಕೆ ಸಂಬಂಧಿಸಿದ ಅರಣ್ಯ ವೀಕ್ಷಕ ಹುದ್ದೆಗೆ ಅರ್ಜಿ ಸಲ್ಲಿಸುವುದು ಒಳಿತು.**

(2) ಅಭ್ಯರ್ಥಿಗಳು ನೇಮಕಾತಿಯ ಎಲ್ಲಾ ಪರೀಕ್ಷೆಗಳಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು ಹಾಗೂ ಈ ಎಲ್ಲಾ ಪರೀಕ್ಷೆಗಳು ಒಂದಕ್ಕಿಂತ ಹೆಚ್ಚಿನ ದಿನ ನಡೆಯುವುದರಿಂದ ಈ ಬಗ್ಗೆ ಎಲ್ಲಾ ಪೂರ್ವಸಿದ್ಧತೆ ಹಾಗೂ ತಂಗುವಿಕೆ ಬಗ್ಗೆ ಸ್ವಂತ ಖರ್ಚಿನಲ್ಲಿ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು.

**7.3 ಲಿಖಿತ ಪರೀಕ್ಷೆ ಬರೆಯುವ ಭಾಷೆ:**

ಲಿಖಿತ ಪರೀಕ್ಷೆ ಬರೆಯಲು ಅಭ್ಯರ್ಥಿಗಳು ಕನ್ನಡ ಅಥವಾ ಆಂಗ್ಲ ಭಾಷೆಯನ್ನು ಆಯ್ದುಕೊಳ್ಳಬಹುದಾಗಿದೆ. ಅಭ್ಯರ್ಥಿಯು ಆಯ್ದುಕೊಂಡ ಪರೀಕ್ಷೆ ಬರೆಯುವ ಭಾಷೆಯನ್ನು ಅರ್ಜಿಯ ಸಂಬಂಧಿಸಿದ ಕಾಲಂನಲ್ಲಿ ತಪ್ಪದೆ ನಮೂದಿಸಬೇಕು. ಅಭ್ಯರ್ಥಿಯು ಅರ್ಜಿಯಲ್ಲಿ ಒಂದು ಸಾರಿ ನಮೂದಿಸಿರುವ ಲಿಖಿತ ಪರೀಕ್ಷೆ ಬರೆಯುವ ಭಾಷೆಯನ್ನು ಯಾವುದೇ ಕಾರಣಕ್ಕೂ ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

**7.4** 7ನೇ ತರಗತಿ ಹಾಗೂ ಅದಕ್ಕಿಂತ ಮೇಲ್ಪಟ್ಟ ವಿದ್ಯಾಭ್ಯಾಸದಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಅಭ್ಯಸಿಸದೇ ಇರುವ ಅಭ್ಯರ್ಥಿಗಳಿಗೆ ಕರ್ನಾಟಕ ಸಿವಿಲ್ ಸೇವೆಗಳು (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳು, 1984ಕ್ಕೆ ಪೂರಕವಾಗಿ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 69 ಎಸ್‌ಸಿಆರ್ 84 ದಿನಾಂಕ 23–9–1985 ರಲ್ಲಿ ಸೂಚಿಸಿದ ಪ್ರಕಾರ ಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಲು ನಿಗದಿಪಡಿಸಿದ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಂತರವೇ ಅಭ್ಯರ್ಥಿಗಳು ನೇಮಕಾತಿ ಹೊಂದಲು ಅರ್ಹರಾಗುತ್ತಾರೆ. ಕನ್ನಡ ಭಾಷಾ ಪರೀಕ್ಷೆಯಲ್ಲಿ ಅನುತ್ತೀರ್ಣರಾಗುವ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

**7.5 ಕನ್ನಡ ಭಾಷಾ ಪರೀಕ್ಷೆಯ ಪಠ್ಯಕ್ರಮ**

**7.6.** ಕನ್ನಡ ಭಾಷಾ ಪರೀಕ್ಷೆಯನ್ನು ಎರಡು ಹಂತದಲ್ಲಿ ನಡೆಸಲಾಗುತ್ತದೆ. ಇದರ ವಿವರ ಕೆಳಗೆ ನಮೂದಿಸಿದೆ.
ಸಮಯ: 1.00 ಗಂಟೆ

| | | |
|---|---|---|
| ಮೊದಲನೇ ಹಂತ – ಲಿಖಿತ ಪರೀಕ್ಷೆ: | ಲಿಖಿತ ಪರೀಕ್ಷೆಗೆ ಕನ್ನಡ ಶಾಲಾ ನಾಲ್ಕನೇ ತರಗತಿಯ ಕನ್ನಡ ಮುಖ್ಯ ಪಠ್ಯಪುಸ್ತಕ ಹಾಗೂ ವಿವಿಧ ಲೇಖಕರು ಬರೆದ ಕರ್ನಾಟಕ ವಯಸ್ಕರ ಶಿಕ್ಷಣ ಪರಿಷತ್ತು ಪ್ರಕಟಿಸಿರುವ "ಸತ್ಯಕ್ಕೆ ಬೆಲೆ ಕೊಟ್ಟ ಗೆಳೆಯರು" ಎಂಬ ಪಾಠದಿಂದ ಆರಂಭವಾಗುವ ಸಣ್ಣಕಥೆಗಳು ಇವುಗಳಿಂದ ಪ್ರಶ್ನೆಗಳನ್ನು ಕೊಡಲಾಗುವುದು. | 90 ಅಂಕಗಳು |
| ಎರಡನೇ ಹಂತ – ಮೌಖಿಕ ಪರೀಕ್ಷೆ: | ಅ) ಮುದ್ರಿತ ಹಾಗೂ ಹಸ್ತ ಪ್ರತಿಗಳನ್ನು ಓದುವುದು.<br>ಆ) ಅರ್ಜಿಗಳನ್ನು ಓದಿ ವಿವರಿಸುವುದು.<br>ಇ) ಸಂಭಾಷಣೆ ನಡೆಸುವುದು. | 10 ಅಂಕಗಳು |

**7.7** ಈ ಕೆಳಗಿನ ಮಟ್ಟದಲ್ಲಿ ಮೂರು ವಿಧದಲ್ಲಿ ಕನಿಷ್ಠ ಅಂಕಗಳನ್ನು ಪಡೆದವರು ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರುವರೆಂದು ಪರಿಗಣಿಸಲಾಗುವುದು.

(ಅ) ಲಿಖಿತ ಪರೀಕ್ಷೆಯಲ್ಲಿ ಪಡೆಯತಕ್ಕ ಕನಿಷ್ಠ ಅಂಕಗಳು: 30
(ಆ) ಮೌಖಿಕ ಪರೀಕ್ಷೆಯಲ್ಲಿ ಪಡೆಯತಕ್ಕ ಕನಿಷ್ಠ ಅಂಕಗಳು: 3
(ಇ) ಲಿಖಿತ ಪರೀಕ್ಷೆಯಲ್ಲಿ ಮತ್ತು ಮೌಖಿಕ ಪರೀಕ್ಷೆಯಲ್ಲಿ ಒಟ್ಟಿಗೆ ಪಡೆಯತಕ್ಕ ಕನಿಷ್ಠ ಅಂಕಗಳು: 35

**8.** ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದಲ್ಲಿ ಹಾಗೂ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮ, ಮೀಸಲಾತಿ ನಿಯಮಗಳ ಪ್ರಕಾರ ಪರಿಗಣಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

**9. ನೇಮಕಾತಿ ಹೊಂದಿದ ಅಭ್ಯರ್ಥಿಗಳ ಸ್ಥಳ ನಿಯುಕ್ತಿ:**

ನೇಮಕಾತಿ ಹೊಂದಿದ ಅಭ್ಯರ್ಥಿಯು ಪ್ರಪ್ರಥಮವಾಗಿ ನೇಮಕ ಮಾಡಿದ ಸ್ಥಳದಲ್ಲಿ ಕನಿಷ್ಠ 5 ವರ್ಷಗಳ ಸೇವೆಯನ್ನು ಪೂರೈಸತಕ್ಕದ್ದು.

**10. ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಲ್ಲಿಸಬೇಕಾದ ದಾಖಲೆ/ಪ್ರಮಾಣ ಪತ್ರಗಳ ವಿವರ:** ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವವರು ಜಾತಿ ಪ್ರಮಾಣ ಪತ್ರ ಹಾಗೂ ಆದಾಯ ಪ್ರಮಾಣ ಪತ್ರ, ಇತ್ಯಾದಿ ಮೀಸಲಾತಿ ಕುರಿತು ಪ್ರಮಾಣ ಪತ್ರಗಳನ್ನು ಈ ಕೆಳಕಂಡ ನಮೂನೆಗಳಲ್ಲಿ ಹೊಂದಿರಬೇಕು.

**10.1** ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರವನ್ನು "ನಮೂನೆ–ಡಿ" ರಲ್ಲಿ ಪಡೆದಿರಬೇಕು.

**10.2** ಪ್ರವರ್ಗ–I ಕ್ಕೆ ಸೇರಿದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರವನ್ನು "ನಮೂನೆ–ಇ" ರಲ್ಲಿ ಪಡೆದಿರಬೇಕು.

**10.3** ಪ್ರವರ್ಗ–IIಎ, IIಬಿ, IIIಎ ಮತ್ತು IIIಬಿ. ಗೆ ಸೇರಿದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್ ರವರಿಂದ

ನೀಡಲಾದ ಆದಾಯ ಮತ್ತು ಜಾತಿ ಪ್ರಮಾಣ ಪತ್ರವನ್ನು "ನಮೂನೆ–ಎಫ್" ರಲ್ಲಿ ಪಡೆದಿರಬೇಕು.

**ವಿಶೇಷ ಸೂಚನೆ:–** "ನಮೂನೆ–ಎಫ್" ಪ್ರಮಾಣ ಪತ್ರವು ಅಧಿಸೂಚನೆಯ ದಿನಾಂಕಕ್ಕೆ ಐದು (5) ವರ್ಷಗಳಿಗಿಂತ ಹೆಚ್ಚು ಹಳೆಯ ಸಮಯದ್ದಾಗಿರಬಾರದು. ಅವಧಿ ಮೀರಿದ ಪ್ರಮಾಣ ಪತ್ರವನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

**10.4** ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಯು ಸಂಬಂಧಪಟ್ಟ ತಹಶೀಲ್ದಾರ್‌ರಿಂದ "ನಮೂನೆ–3" ರಲ್ಲಿ ನೀಡಿರುವ ಪ್ರಮಾಣ ಪತ್ರವನ್ನು ಪಡೆದಿರಬೇಕು.

**10.5** ಮಾಜಿ ಸೈನಿಕ ಅಭ್ಯರ್ಥಿಗಳು ಸಂಬಂಧಪಟ್ಟ ಘಟಕದಿಂದ ಡಿಸ್‌ಚಾರ್ಜ್ ಹೊಂದಿದ ಬಗ್ಗೆ ಮೂಲ ಪ್ರಮಾಣ ಪತ್ರ ಮತ್ತು ಪೆನ್‌ಷನ್ ಪಡೆಯುತ್ತಿರುವ ಬಗ್ಗೆ ದಾಖಲೆ ಪತ್ರ ಪಡೆದಿರಬೇಕು ಹಾಗೂ ಮಾಜಿ ಸೈನಿಕ ಮೀಸಲಾತಿಗೆ ನಿಯಮಾನುಸಾರ ಅರ್ಹರೇ ಎಂಬ ಬಗ್ಗೆ ಪ್ರಮಾಣ ಪತ್ರವನ್ನು ಹತ್ತಿರದ ಸೈನಿಕ ಕಲ್ಯಾಣ ಹಾಗೂ ಪುನರ್ವಸತಿ ಇಲಾಖೆಯಿಂದ ಪಡೆದಿರಬೇಕು.

**10.6** (ಅ) ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ–I, IIಎ, IIಬಿ, IIIಎ ಮತ್ತು IIIಬಿ, ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು 1ನೇ ತರಗತಿಯಿಂದ 7ನೇ ತರಗತಿಯವರೆಗೆ (ಎಲ್ಲಾ ವರ್ಷಗಳು) ಗ್ರಾಮೀಣ ಪ್ರದೇಶದ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದ ಬಗ್ಗೆ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ನೀಡಲಾದ "ನಮೂನೆ–2"ನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲುರುಜು ಮಾಡಿದ ಪ್ರಮಾಣ ಪತ್ರವನ್ನು ಪಡೆದಿರಬೇಕು.

(ಆ) ಗ್ರಾಮೀಣ ಮೀಸಲಾತಿ ಕೋರಿರುವ ಸಾಮಾನ್ಯ ಅರ್ಹತೆಯ (General Merit) ಅಭ್ಯರ್ಥಿಗಳು ಮೇಲೆ 10.6(ಅ) ರಲ್ಲಿ ತಿಳಿಸಿರುವ "ನಮೂನೆ–2" ರ ಜೊತೆಗೆ ನಿಗದಿತ "ನಮೂನೆ–1" ರಲ್ಲಿ ಸಂಬಂಧಪಟ್ಟ ತಹಶೀಲ್ದಾರರಿಂದ ಅವರು ಮೇಲುಸ್ಥರ (Creamy Layer) ಪರಿಮಿತಿಯಲ್ಲಿ ಬರುವುದಿಲ್ಲವೆಂದು ದೃಢೀಕರಿಸಿರುವ ಪ್ರಮಾಣ ಪತ್ರ ಪಡೆದಿರಬೇಕು.

**ವಿಶೇಷ ಸೂಚನೆ:–** ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ–I, IIಎ, IIಬಿ, IIIಎ ಮತ್ತು IIIಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಆದಾಯ ಮತ್ತು ಜಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

**10.7** ಕನ್ನಡ ಮಾಧ್ಯಮ ವರ್ಗೀಕರಣದಲ್ಲಿ ಮೀಸಲಾತಿ ಕೋರಿರುವ ಅಭ್ಯರ್ಥಿಗಳು 1ನೇ ತರಗತಿಯಿಂದ 7ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಬಗ್ಗೆ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿದ ಪ್ರಮಾಣ ಪತ್ರ ಪಡೆದಿರಬೇಕು.

**10.8** ಅರಣ್ಯ ಪ್ರೇರಕರಾಗಿ ಅಧಿಸೂಚನೆ ದಿನಾಂಕಕ್ಕೆ ಐದು (5) ವರ್ಷಗಳ ಸೇವೆಯನ್ನು ಸಲ್ಲಿಸಿದ್ದು, ಪ್ರಸ್ತುತ ಅರಣ್ಯ ಪ್ರೇರಕರಾಗಿ ಮುಂದುವರೆಯುತ್ತಿರುವ ಅರಣ್ಯ ಪ್ರೇರಕರ ಬಗ್ಗೆ ಸಂಬಂಧಿಸಿದ ಸಾಮಾಜಿಕ ಅರಣ್ಯ ವಿಭಾಗಗಳ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

**10.9** ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳಿಗೆ ಮೀಸಲಾತಿ ಕೋರುವ ಅಭ್ಯರ್ಥಿಗಳು **ಕುಷ್ಠರೋಗದಿಂದ ಗುಣಮುಖರಾಗಿರುವ ಬಗ್ಗೆ** ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19.11.2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ **ಕುಷ್ಠರೋಗದಿಂದ ಗುಣಮುಖರಾಗಿರುವ ಬಗ್ಗೆ** ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

**10.10** ಕ್ರಮ ಸಂಖ್ಯೆ 1.2 ರಲ್ಲಿ ನಮೂದಿಸಿರುವ ಪರಿಶಿಷ್ಠ ಪಂಗಡಕ್ಕೆ ಸೇರಿದ ನಿಗದಿಪಡಿಸಿರುವ ಬುಡಕಟ್ಟು ಜನಾಂಗದ ಅಭ್ಯರ್ಥಿಗಳು 1ನೇ ತರಗತಿಯಿಂದ 7ನೇ ತರಗತಿಯವರೆಗೆ ಅಭ್ಯಸಿಸಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸುವುದು ಹಾಗೂ ವಾಸಸ್ಥಳದ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸುವುದು.

## 11.0 ಗಮನಿಸಬೇಕಾದ ಮುಖ್ಯ ಅಂಶಗಳು:

**11.1** ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಯು ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ.

**11.2** ನಿಗದಿತ ಅರ್ಜಿಯಲ್ಲಿ ಚಿತ್ತು ಅಥವಾ ಹೊಡೆದು ಹಾಕುವುದು ಕೂಡ ಮಾಡಬಾರದು. ಹಾಗೇನಾದರೂ ಚಿತ್ತು ಆದಲ್ಲಿ, ಹೊಡೆದು ಹಾಕಿದಲ್ಲಿ ಅಥವಾ ಅರ್ಜಿಯನ್ನು ವಿರೂಪಗೊಳಿಸಿದ್ದಲ್ಲಿ ಮತ್ತೊಂದು ಅರ್ಜಿಯನ್ನು ತುಂಬಿ ಸಲ್ಲಿಸುವುದು ಅವಶ್ಯಕ. ಭರ್ತಿ ಮಾಡಿದ ಅರ್ಜಿಯಲ್ಲಿನ ವಿವರಗಳು ಸರಿಯಾಗಿದೆಯೇ ಎಂದು ಮನಗಂಡು ಆ ನಂತರ ಅರ್ಜಿಯನ್ನು ಸಲ್ಲಿಸುವುದು ಸೂಕ್ತ.

**11.3** ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

**11.4** ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡುವಾಗ ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿಗಳೇ ಅದಕ್ಕೆ ನೇರ ಮತ್ತು ಸಂಪೂರ್ಣ ಜವಾಬ್ದಾರರಾಗುತ್ತಾರೆ. ಅಭ್ಯರ್ಥಿಗಳು ನಿಗದಿತ ಅರ್ಜಿಯಲ್ಲಿ ನೀಡಿರುವ ಮಾಹಿತಿ/ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ. ಆದ ಪ್ರಯುಕ್ತ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಈ ಕಚೇರಿಯ ಅಧಿಸೂಚನೆಯಲ್ಲಿ

ತಿಳಿಸಿರುವ ಎಲ್ಲಾ ಅಂಶಗಳು ಹಾಗೂ ಅರ್ಜಿ ಭರ್ತಿ ಮಾಡುವ ವಿಧಾನದ ಕುರಿತು ಸೂಚಿಸಿರುವ ಎಲ್ಲಾ ಅಂಶಗಳನ್ನು ಸರಿಯಾಗಿ ಅರ್ಥೈಸಿಕೊಂಡು, ಅರ್ಜಿಯನ್ನು ಸರಿಯಾಗಿ ಮತ್ತು ಸಮರ್ಪಕವಾಗಿ ಭರ್ತಿ ಮಾಡತಕ್ಕದ್ದು.

**11.5** ಪ್ರವರ್ಗದ ಮೀಸಲಾತಿಯಲ್ಲಿ ಆಯ್ಕೆ ಬಯಸುವ ಅಭ್ಯರ್ಥಿಗಳು ಅರ್ಜಿಯಲ್ಲಿ ಪ್ರವರ್ಗದ ಕಾಲಂ ಅನ್ನು ಕಡ್ಡಾಯವಾಗಿ ನಮೂದಿಸಬೇಕು. ಈ ಕಾಲಂ ಅನ್ನು ಭರ್ತಿ ಮಾಡದೆ ಖಾಲಿ ಬಿಟ್ಟಲ್ಲಿ "ಸಾಮಾನ್ಯ ಅರ್ಹತೆ" ಎಂದು ಪರಿಗಣಿಸಲಾಗುವುದು. ಯಾವುದೇ ಹಂತದಲ್ಲಿ ಅಭ್ಯರ್ಥಿಯು ತಾನು ಹೊಂದಿರುವ ಪ್ರವರ್ಗದ ಕುರಿತು ಮಾಹಿತಿಯನ್ನು ಹೊಸದಾಗಿ ಸೇರ್ಪಡೆ ಮಾಡಲು ಅಥವಾ ಬದಲಾವಣೆ ಮಾಡಲು ಅವಕಾಶವಿಲ್ಲ.

**11.6** ಅಂಚೆ ಮೂಲಕ ಅಥವಾ ಇನ್ನಿತರೆ ಯಾವುದೇ ವ್ಯವಸ್ಥೆ ಮೂಲಕ ನಿಗದಿಪಡಿಸಿದ ದಿನಾಂಕದ ನಂತರ ಸ್ವೀಕೃತವಾದ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ ಹಾಗೂ ಅರ್ಜಿಗಳು ಮೇಲೆ ತಿಳಿಸಿರುವ ವಿಳಾಸಕ್ಕೆ ತಲುಪಲು ವಿಳಂಬವಾದರೆ ಅಥವಾ ಸ್ವೀಕೃತವಾಗದೇ ಇರುವುದಕ್ಕೆ ಇಲಾಖೆಯು ಜವಾಬ್ದಾರಿಯಲ್ಲ.

**11.7** ನಿಗದಿತ ನಮೂನೆಯಲ್ಲಿಲ್ಲದ ಅಥವಾ ಅಸ್ಪಷ್ಟ/ಅಪೂರ್ಣ ಮಾಹಿತಿ ಭರ್ತಿ ಮಾಡಿದ ಅರ್ಜಿಗಳನ್ನು ಅನರ್ಹ ಅರ್ಜಿಗಳೆಂದು ಪರಿಗಣಿಸಿ ತಿರಸ್ಕರಿಸಲಾಗುವುದು. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ಭರ್ತಿ ಮಾಡದ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ವಂಚಿತರಾದಲ್ಲಿ ತತ್ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

**11.8** ಒಬ್ಬನೇ ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ತಾನು ಸಲ್ಲಿಸಿರುವ ಎಲ್ಲಾ ಅರ್ಜಿಗಳಲ್ಲಿಯೂ ಒಂದೇ ರೀತಿ ಮಾಹಿತಿಯನ್ನು ನೀಡಿದಲ್ಲಿ ಅಭ್ಯರ್ಥಿ ಸಲ್ಲಿಸಿರುವ ಯಾವುದಾದರೂ ಒಂದು ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ.

**11.9** ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚಿನ ಅರ್ಜಿ ಭರ್ತಿ ಮಾಡಿ ಬೇರೆ ಬೇರೆ ಅರ್ಜಿಗಳಲ್ಲಿ ವಿಭಿನ್ನವಾದ ಮಾಹಿತಿಗಳನ್ನು ನಮೂದಿಸಿದ್ದಲ್ಲಿ ಅಂತಹ ಅಭ್ಯರ್ಥಿಯು ಸಲ್ಲಿಸಿದ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**11.10** ಪ್ರಸ್ತುತ ಸರ್ಕಾರಿ (ಕೇಂದ್ರ ಸರ್ಕಾರ/ಕರ್ನಾಟಕ ರಾಜ್ಯ ಸರ್ಕಾರ/ಇತರೆ ರಾಜ್ಯಗಳು) ಹಾಗೂ ಸಂಸ್ಥೆಗಳಲ್ಲಿ ಅಥವಾ ಪ್ರಾಧಿಕಾರದಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಕಡ್ಡಾಯವಾಗಿ ಅನುಮತಿ ಪತ್ರವನ್ನು ಪಡೆದಿಟ್ಟುಕೊಂಡು ಅರಣ್ಯ ಇಲಾಖೆಯು ಅಪೇಕ್ಷಿಸಿದಾಗ ನೀಡತಕ್ಕದ್ದು.

**11.11** ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಯನ್ನು ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು.

**11.12** ಕರ್ನಾಟಕ ರಾಜ್ಯದ ಯಾವುದೇ ಸರ್ಕಾರಿ ಇಲಾಖೆ, ಕೇಂದ್ರ ಸರ್ಕಾರಿ ಇಲಾಖೆ ಅಥವಾ ಅರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

**11.13** ಕಾನೂನು ಬಾಹಿರವೆಂದು ಘೋಷಿಸಲಾದ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘದ/ಸಂಘಗಳ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘ/ಸಂಘಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ.

**11.14** ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ ಅಂತಹ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

**11.15** ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು / ಪತಿಯರನ್ನು ಹೊಂದಿದ ಪುರುಷ / ಮಹಿಳೆ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

**11.16** ಯಾವುದೇ ಅಭ್ಯರ್ಥಿಯು ಕೇಂದ್ರ ಅಥವಾ ಯಾವುದೇ ರಾಜ್ಯ ಸರ್ಕಾರ / ಸರ್ಕಾರಿ ಸಂಸ್ಥೆಗಳಿಗೆ ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗಲು ತಾತ್ಕಾಲಿಕವಾಗಿ ಬಹಿಷ್ಕರಿಸಲ್ಪಟ್ಟಿದ್ದರೆ ಅಥವಾ ಖಾಯಂ ಆಗಿ ಅನರ್ಹಗೊಂಡಿದ್ದರೆ ಅಥವಾ ಬಹಿಷ್ಕರಿಸಲ್ಪಟ್ಟಿದ್ದರೆ, ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

**11.17** ಅಭ್ಯರ್ಥಿಯು ನೇಮಕಾತಿ ಪರೀಕ್ಷೆಗೆ ಬೇರೊಬ್ಬ ವ್ಯಕ್ತಿಯನ್ನು ತನ್ನ ಪರವಾಗಿ ಕಳುಹಿಸಿದಲ್ಲಿ ಅಥವಾ ತಪ್ಪು ಮಾಹಿತಿಗಳನ್ನು ನಮೂದಿಸಿದಲ್ಲಿ ಅಥವಾ ಕೃತ್ರಿಮ ಅಥವಾ ತಿದ್ದಿದ ದಾಖಲಾತಿಗಳನ್ನು ಅಥವಾ ಅಸತ್ಯ ವಿವರಗಳನ್ನು ನೀಡಿದಲ್ಲಿ ಅಥವಾ ಸತ್ಯ ವಿಷಯಗಳನ್ನು ಮರೆಮಾಚಿದ ಅಥವಾ ಅನುಚಿತ ಮಾರ್ಗಗಳನ್ನು ಉಪಯೋಗಿಸಿದಲ್ಲಿ ಅಥವಾ ಪ್ರಯತ್ನಿಸಿದಲ್ಲಿ ಈ ನೇಮಕಾತಿಗೆ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಉಪ ನಿಯಮ 20 ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು.

**11.18** ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ–ಎಸ್‌ಪಿಎಲ್–04–ಪಿಇಟಿ–2005 ದಿನಾಂಕ 31–3–2006 ರಂತೆ ಅಂಶದಾಯಿ ನಿವೃತ್ತಿ ಯೋಜನೆ (Contributory Pension Scheme) ಗೆ ಈ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಬದ್ಧರಾಗಿರುತ್ತಾರೆ.

**11.19** ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯ ಬಗ್ಗೆ ಅಭ್ಯರ್ಥಿಗಳಿಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಅಭ್ಯರ್ಥಿಗಳು ಆಯಾ ಪರೀಕ್ಷಾ ದಿನವೇ ಅಭ್ಯರ್ಥಿಯ ಹೆಸರು, ವಿಳಾಸ, ನೋಂದಣಿ ಸಂಖ್ಯೆ, ಆಕ್ಷೇಪಣೆಯ ವಿವರ, ಸಹಿ, ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ಸಂಬಂಧಿಸಿದ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಪ್ರಾದೇಶಿಕ ಪರೀಕ್ಷಕರು ಇವರಿಗೆ ಸಲ್ಲಿಸಿ ಅವರಿಂದ ಸ್ವೀಕೃತಿ

(Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

**11.20** ಆಯ್ಕೆ ಮತ್ತು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆಗೆ ಪರಿಗಣಿಸಿರುವ ಅಂಶಗಳ ಬಗ್ಗೆ ವ್ಯತ್ಯಾಸ ಕಂಡು ಬಂದಲ್ಲಿ ಅಥವಾ ಆಕ್ಷೇಪಣೆ ಸಲ್ಲಿಕೆಯಾದಲ್ಲಿ, ಕೋರ್ಟು ತೀರ್ಪುಗಳು, ಸರಕಾರದ ನಿರ್ದೇಶನಗಳು, ಇಲಾಖೆ ಸುತ್ತೋಲೆಗಳು ಬಂದಲ್ಲಿ, ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿ ಸೂಕ್ತ ಬದಲಾವಣೆ ಮಾಡಿ ಆಯ್ಕೆ ಪಟ್ಟಿ ಪರಿಷ್ಕರಿಸುವ ಅಧಿಕಾರವನ್ನು ಆಯ್ಕೆ ಪ್ರಾಧಿಕಾರವು ಹೊಂದಿರುತ್ತದೆ.

**11.21** ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿರುವ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿ ಮತ್ತು ಮೀಸಲಾತಿ ವರ್ಗೀಕರಣದಲ್ಲಿ ಏನಾದರೂ ಬದಲಾವಣೆ ಮಾಡಬೇಕಾದ ಅವಶ್ಯಕತೆ ಕಂಡು ಬಂದಲ್ಲಿ ಬದಲಾವಣೆ ಮಾಡಲಾಗುವುದು ಮತ್ತು ಬದಲಾದ ವಿವರಗಳನ್ನು ಇಲಾಖಾ ವೆಬ್‌ಸೈಟ್: **www.karnatakaforest.gov.in** ನಲ್ಲಿ ಪ್ರಕಟಿಸಲಾಗುವುದು.

**11.22** ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ಅಧಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

**11.23** ಉತ್ತರ ಪತ್ರಿಕೆಯನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ಧಪಡಿಸುವುದರಿಂದ ಲಿಖಿತ ಪರೀಕ್ಷೆಗೆ ಅರ್ಹತೆ ಪಡೆದಿರುವ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮಾಹಿತಿಯನ್ನು ಭರ್ತಿ ಮಾಡುವ ಸಲುವಾಗಿ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಗೆ ತಪ್ಪದೇ ಹಾಜರಾಗತಕ್ಕದ್ದು. ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಕೆಲವು ಮಾರ್ಗಸೂಚನೆಗಳನ್ನು ನೀಡುತ್ತಾರೆ.

**11.24** ಯಾವುದೇ ಪರೀಕ್ಷೆಗೆ ಸೂಚನೆ / ತಿಳುವಳಿಕೆ ಪತ್ರ ದೊರಕದ ಅಭ್ಯರ್ಥಿಗಳು ನೇಮಕಾತಿಗೆ ಆಯ್ಕೆಯಾಗಿ ರುವುದಿಲ್ಲವೆಂದು ತಿಳಿಯುವುದು. ಈ ವಿಷಯದಲ್ಲಿ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ.

**11.25** ಪ್ರಸ್ತುತ ನೋಟಿಫೈ ಮಾಡಿರುವ ಅರಣ್ಯ ವೀಕ್ಷಕ ಹುದ್ದೆಗಳ ಸಂಖ್ಯೆಗಳಲ್ಲಿ ಸಂದರ್ಭಕ್ಕನುಸಾರ ಹೆಚ್ಚಳ ಅಥವಾ ಕಡಿತ ಮಾಡಿದಲ್ಲಿ ಈ ವಿವರವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಪಡಿಸಲಾಗುವುದು.

ಸಹಿ/-

**ಅರಣ್ಯ ಸಂರಕ್ಷಣಾಧಿಕಾರಿ**
**ಮತ್ತು ಆಯ್ಕೆ ಪ್ರಾಧಿಕಾರ**
**ಮೈಸೂರು ವೃತ್ತ, ಮೈಸೂರು.**

ಮೈಸೂರು,
ದಿನಾಂಕ: 27-06-2011.

# ಅರ್ಜಿ ಭರ್ತಿ ಮಾಡುವ ವಿಧಾನದ ಮಾಹಿತಿ

- **ಅಭ್ಯರ್ಥಿಯು ಅರ್ಜಿಯನ್ನು ತುಂಬುವ ಮುನ್ನ ನೇಮಕಾತಿ ಅಧಿಸೂಚನೆ/ಅರ್ಜಿ ಭರ್ತಿ ಮಾಡುವ ವಿಧಾನದ ಮಾಹಿತಿಯನ್ನು ಓದಿ ಮನದಟ್ಟು ಮಾಡಿಕೊಂಡು ಅರ್ಜಿಯನ್ನು ಭರ್ತಿ ಮಾಡುವುದು.**
- **ಅಭ್ಯರ್ಥಿಗೆ ಅನ್ವಯಿಸುವ ಮಾಹಿತಿಯನ್ನು ಕಪ್ಪು ಅಥವಾ ನೀಲಿ ಬಣ್ಣದ ಬಾಲ್ ಪಾಯಿಂಟ್ ಪೆನ್ ಉಪಯೋಗಿಸಿ ಭರ್ತಿ ಮಾಡುವುದು ಹಾಗೂ ಅನ್ವಯಿಸುವ ಚೌಕಗಳನ್ನು (✓) ಟಿಕ್ ಮಾಡುವುದು.**

**1.** ನಿಗದಿಪಡಿಸಿರುವ ಚೌಕದೊಳಗೆ ಅಭ್ಯರ್ಥಿಯ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅಂಟಿಸಬೇಕು. (ಭಾವಚಿತ್ರದ ಮೇಲೆ ಸಹಿ ಮಾಡಬಾರದು, ಪಿನ್ನು ಹಾಕಬಾರದು).

| 1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಅಂಟಿಸುವುದು. |
|---|

**2.** ನಿಗದಿಪಡಿಸಿರುವ ಚೌಕದೊಳಗೆ ಮಾತ್ರ ಅಭ್ಯರ್ಥಿಯು ಕಪ್ಪು ಅಥವಾ ನೀಲಿ ಬಣ್ಣದ ಬಾಲ್ ಪಾಯಿಂಟ್ ಪೆನ್ನಿನಿಂದ ಸಹಿ ಮಾಡುವುದು.

2. ಅಭ್ಯರ್ಥಿಯ ಸಹಿ.

**3.** **ಅಭ್ಯರ್ಥಿಯ ಹೆಸರು, ತಂದೆಯ ಹೆಸರು ಮತ್ತು ಪೂರ್ಣ ಅಂಚೆ ವಿಳಾಸ (ಪಿನ್ ಕೋಡ್‌ನೊಂದಿಗೆ):** ವಿವರಗಳನ್ನು ಸ್ಪಷ್ಟವಾಗಿ ಕೆಳಗಿನ ಚೌಕದಲ್ಲಿ ಬರೆಯಿರಿ. ಈ ಚೌಕದ ಹೊರಗೆ ಬರೆಯಬೇಡಿ.

*ಉದಾಹರಣೆ:*

**ಪ್ರವೀಣ್ ಕುಮಾರ್ ಎ. ಎಸ್.,**
ಶ್ರೀ ನಾರಾಯಣನವರ ಮಗ, ನಂ.42, 15ನೇ ಕ್ರಾಸ್,
ಮಲ್ಲೇಶ್ವರಂ, ಬೆಂಗಳೂರು–560003.

**4.** **ಅಭ್ಯರ್ಥಿಯ ಹೆಸರು:** ಶಾಲಾ ವರ್ಗಾವಣೆ ಪತ್ರ/ಅಂಕಪಟ್ಟಿಯಲ್ಲಿರುವಂತೆ ಅಭ್ಯರ್ಥಿಯ ಹೆಸರನ್ನು ಕಾಲಂನ ಚೌಕಗಳಲ್ಲಿ ಬಿಡಿಬಿಡಿಯಾಗಿ **ಆಂಗ್ಲ ಭಾಷೆಯ** CAPITAL LETTERS **ಗಳಲ್ಲಿ** ಮಾತ್ರ ಬರೆಯುವುದು. ಹೆಸರಿನ ಆರಂಭ, ಮಧ್ಯ ಅಥವಾ ಕೊನೆಯಲ್ಲಿ ಇನಿಷಿಯಲ್ಸ್ (Initials) ಇದ್ದಲ್ಲಿ ಅದನ್ನು ಒಂದು ಚೌಕದಲ್ಲಿ ಬರೆದು ಅಕ್ಕಪಕ್ಕದ ಚೌಕಗಳನ್ನು ಖಾಲಿ ಬಿಡುವುದು. ಯಾವುದೇ ಚುಕ್ಕೆಯನ್ನು ಈ ಚೌಕಗಳಲ್ಲಿ ಇಡುವಂತಿಲ್ಲ. ಒಂದಕ್ಕಿಂತ ಹೆಚ್ಚು ಆಂಗ್ಲ ಅಕ್ಷರಗಳ ಇನಿಷಿಯಲ್ಸ್ ಇದ್ದಲ್ಲಿ ಪ್ರತಿ ಇನಿಷಿಯಲ್ ಅಕ್ಷರಗಳನ್ನು ಬಿಡಿ ಬಿಡಿಯಾಗಿ ಬೇರೆ ಬೇರೆ ಚೌಕಗಳಲ್ಲಿ ಬರೆಯುವುದು ಮತ್ತು ಇನಿಷಿಯಲ್‌ನ ಅಕ್ಕಪಕ್ಕದ ಚೌಕಗಳನ್ನು ಖಾಲಿ ಬಿಡುವುದು.

*ಉದಾ:*

| | | | | | | | | | | | |
|---|---|---|---|---|---|---|---|---|---|---|---|
| P | R | A | V | E | E | N | | K | U | M | A |
| R | | A | | S | | | | | | | |

**5.** **ಮೊಬೈಲ್ ಸಂಖ್ಯೆ:** ಅಭ್ಯರ್ಥಿಯ ಅಥವಾ ಪೋಷಕರ ಬಳಿ ಮೊಬೈಲ್ ಫೋನ್ ಇದ್ದಲ್ಲಿ ಅದರ ಸಂಖ್ಯೆಯನ್ನು ನಿಗದಿತ ಚೌಕಗಳಲ್ಲಿ ನಮೂದಿಸುವುದು. ಒಂದು ವೇಳೆ ಮೊಬೈಲ್ ಫೋನ್ ಇಲ್ಲದೇ ಇದ್ದಲ್ಲಿ, ಮೊಬೈಲ್ ಸಂಖ್ಯೆ ಚೌಕಗಳನ್ನು ಖಾಲಿ ಬಿಡುವುದು.

**6.** **ಜನ್ಮ ದಿನಾಂಕ:** **ಅಭ್ಯರ್ಥಿಯ** ಜನ್ಮ ದಿನ, ತಿಂಗಳು ಹಾಗೂ ವರ್ಷವನ್ನು ಕಾಲಂನ ಚೌಕಗಳಲ್ಲಿ ಕ್ರಮವಾಗಿ ಈ ಕೆಳಕಂಡಂತೆ ನಮೂದಿಸುವುದು. ಅಭ್ಯರ್ಥಿಯು ಹುಟ್ಟಿದ ದಿನಾಂಕ ಸಿಂಗಲ್ ಡಿಜಿಟ್ ಆಗಿದ್ದಲ್ಲಿ ಮೊದಲನೆ ಚೌಕದಲ್ಲಿ ಶೂನ್ಯ (0) ವನ್ನು ತಪ್ಪದೆ ಬರೆಯುವುದು. *ಉದಾಹರಣೆ:* ಅಭ್ಯರ್ಥಿಯ ಹುಟ್ಟಿದ ದಿನಾಂಕವು 04-09-1985 ಆಗಿದ್ದಲ್ಲಿ ಅದನ್ನು ಕೆಳಕಂಡಂತೆ ಭರ್ತಿ ಮಾಡಬೇಕು.

*ಉದಾ:*

| ದಿನ | | | ತಿಂಗಳು | | | ವರ್ಷ | | | |
|---|---|---|---|---|---|---|---|---|---|
| 0 | 4 | / | 0 | 9 | / | 1 | 9 | 8 | 5 |

**7.** **ಲಿಂಗ:** *ಉದಾಹರಣೆ:* ಅಭ್ಯರ್ಥಿಯು ಪುರುಷರಾಗಿದ್ದಲ್ಲಿ [√] ಹೌದು [ ] ಇಲ್ಲ

**8.** **ಪ್ರವರ್ಗ:** ಅನ್ವಯಿಸುವ ಪ್ರವರ್ಗದ ಚೌಕವನ್ನು (ಟಿಕ್) √ ಮಾಡಿ.

*ಉದಾಹರಣೆ:* ಅಭ್ಯರ್ಥಿಯು ಪರಿಶಿಷ್ಟ ಜಾತಿ ಪ್ರವರ್ಗದ ಮೀಸಲಾತಿಗೆ ಅರ್ಹರಿದ್ದಲ್ಲಿ

| | | | |
|---|---|---|---|
| ☐ ಸಾಮಾನ್ಯ ವರ್ಗ | ☑ ಪರಿಶಿಷ್ಟ ಜಾತಿ | ☐ ಪರಿಶಿಷ್ಟ ಪಂಗಡ | ☐ ಪ್ರವರ್ಗ–I |
| ☐ ಪ್ರವರ್ಗ–II(ಎ) | ☐ ಪ್ರವರ್ಗ–II(ಬಿ) | ☐ ಪ್ರವರ್ಗ–III(ಎ) | ☐ ಪ್ರವರ್ಗ–III(ಬಿ) |

9. **ಸಮತಳ ಮೀಸಲಾತಿ:** ಸಮತಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನ್ವಯಿಸುವ ಚೌಕವನ್ನು (ಟಿಕ್) √ ಮಾಡಿ. *ಉದಾ:* ಅಭ್ಯರ್ಥಿಯು ಯೋಜನಾ ನಿರಾಶ್ರಿತ, ಗ್ರಾಮೀಣ ಹಾಗೂ ಕನ್ನಡ ಮಾಧ್ಯಮ ಮೀಸಲಾತಿಗೆ ಅರ್ಹರಿದ್ದಲ್ಲಿ:

   ☐ ಮಾಜಿ ಸೈನಿಕ ☐ ಅಂಗವಿಕಲ ಅಭ್ಯರ್ಥಿ (ಕುಷ್ಠರೋಗದಿಂದ ಗುಣಮುಖ ಹೊಂದಿದವರಿಗೆ ಮಾತ್ರ)

   ☑ ಯೋಜನಾ ನಿರಾಶ್ರಿತ ☑ ಗ್ರಾಮೀಣ ☑ ಕನ್ನಡ ಮಾಧ್ಯಮ

10. **ಅರಣ್ಯ ಪ್ರೇರಕರಾಗಿ ಕನಿಷ್ಠ ಐದು (5) ವರ್ಷಗಳ ಸೇವೆ ಸಲ್ಲಿಸಿ ಪ್ರಸ್ತುತ ಅರಣ್ಯ ಪ್ರೇರಕರಾಗಿಯೇ ಕರ್ತವ್ಯ ನಿರ್ವಹಿಸುತ್ತಿರುವಿರಾ:** *ಉದಾಹರಣೆ:* ಅರಣ್ಯ ಇಲಾಖೆಯಲ್ಲಿ ಅರಣ್ಯ ಪ್ರೇರಕರಾಗಿ ಕನಿಷ್ಠ ಐದು (5) ವರ್ಷಗಳ ಸೇವೆ ಸಲ್ಲಿಸಿ ಪ್ರಸ್ತುತ ಅರಣ್ಯ ಪ್ರೇರಕರಾಗಿಯೇ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ: ☑ ಹೌದು ☐ ಇಲ್ಲ

11. **ಅಭ್ಯರ್ಥಿಯು ಮಾಜಿ ಸೈನಿಕರಾಗಿದ್ದಲ್ಲಿ, ಅಭ್ಯರ್ಥಿಯು ಸಶಸ್ತ್ರ ಪಡೆಗಳಲ್ಲಿ ಸಲ್ಲಿಸಿದ ಸೇವಾ ಅವಧಿ:** *ಉದಾ:* ಮಾಜಿ ಸೈನಿಕ ಅಭ್ಯರ್ಥಿಯು ಸಶಸ್ತ್ರ ಪಡೆಗಳಲ್ಲಿ 16 ವರ್ಷ 08 ತಿಂಗಳು 15 ದಿನ ಸೇವೆ ಸಲ್ಲಿಸಿದ್ದಲ್ಲಿ ಅದನ್ನು ಈ ಕೆಳಗೆ ನೀಡಿರುವ ಮಾದರಿಯಲ್ಲಿ ಕ್ರಮವಾಗಿ ಬರೆಯುವುದು. ಒಂದು ವೇಳೆ ಅಭ್ಯರ್ಥಿಯು ಮಾಜಿ ಸೈನಿಕರಲ್ಲದ ಪಕ್ಷದಲ್ಲಿ ಸಂಬಂಧಿತ ಚೌಕವನ್ನು ಖಾಲಿ ಬಿಡುವುದು.

| <u>ವರ್ಷ</u> | | <u>ತಿಂಗಳು</u> | | <u>ದಿನ</u> |
|---|---|---|---|---|
| 1 6 | / | 0 8 | / | 1 5 |

12. **ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದವರೇ:** *ಉದಾಹರಣೆ:* ಅಧಿಸೂಚನೆಯ ಕ್ರಮ ಸಂಖ್ಯೆ: 1.2 ರಲ್ಲಿ ಸೂಚಿಸಿರುವ ಅನ್ವಯ ಅಭ್ಯರ್ಥಿಯು ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದವರಾಗಿದ್ದಲ್ಲಿ:

    ☑ ಹೌದು ☐ ಇಲ್ಲ

13. **ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದವರಾಗಿದ್ದರೆ, ಜಾತಿಯ ಹೆಸರನ್ನು ನಮೂದಿಸಿ:** *ಉದಾ:* ಅಧಿಸೂಚನೆಯ ಕ್ರಮ ಸಂಖ್ಯೆ: 1.2 ರಲ್ಲಿ ಸೂಚಿಸಿರುವ ಅನ್ವಯ ಅಭ್ಯರ್ಥಿಯು ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ ಮೆಲಕುಡಿ ಜಾತಿಯವರಾಗಿದ್ದಲ್ಲಿ: **MELAKUDI**

14. **7ನೇ ತರಗತಿ ತೇರ್ಗಡೆಯಾಗಿರುವಿರಾ:** *ಉದಾ:* ಅಭ್ಯರ್ಥಿಯು 7ನೇ ತರಗತಿ ತೇರ್ಗಡೆಯಾಗಿದ್ದಲ್ಲಿ:

    ☑ ಹೌದು ☐ ಇಲ್ಲ

15. **ನೇಮಕಾತಿ ಲಿಖಿತ ಪರೀಕ್ಷೆಗೆ ಆಯ್ದುಕೊಂಡ ಮಾಧ್ಯಮ:** *ಉದಾ:* ಅಭ್ಯರ್ಥಿಯು ಲಿಖಿತ ಪರೀಕ್ಷೆಯನ್ನು ಕನ್ನಡ ಮಾಧ್ಯಮದಲ್ಲಿ ಬರೆಯಲು ಅಪೇಕ್ಷಿಸಿದ್ದಲ್ಲಿ: ☑ ಕನ್ನಡ ☐ ಆಂಗ್ಲ

**<u>ವಿಶೇಷ ಸೂಚನೆ:–</u>** ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸಿರುವ ಘೋಷಣೆಯನ್ನು ಓದಿ ಮನದಟ್ಟು ಮಾಡಿಕೊಂಡು ಮನವರಿಕೆ ಮಾಡಿಕೊಂಡು, ಅರಣ್ಯ ಇಲಾಖೆಯು ಅಪೇಕ್ಷಿಸಿರುವ ಮಾಹಿತಿ/ವಿವರಗಳನ್ನು ಭರ್ತಿ ಮಾಡಿ ಘೋಷಣೆಯ ಕೆಳಗೆ ದಿನಾಂಕವನ್ನು ನಮೂದಿಸಿ, ಸಹಿ ಮಾಡುವುದು.

**ಸಹಿ/–**

ಮೈಸೂರು,
ದಿನಾಂಕ: 27–06–2011.

**ಅರಣ್ಯ ಸಂರಕ್ಷಣಾಧಿಕಾರಿ**
**ಮತ್ತು ಆಯ್ಕೆ ಪ್ರಾಧಿಕಾರ**
**ಮೈಸೂರು ವೃತ್ತ, ಮೈಸೂರು.**

ಕರ್ನಾಟಕ ಸರ್ಕಾರ

ಅರಣ್ಯ ಇಲಾಖೆ

## ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಆಯ್ಕೆ ಪ್ರಾಧಿಕಾರ, ಮೈಸೂರು ವೃತ್ತ, ಮೈಸೂರು

# ಅಧಿಸೂಚನೆ

**ಸಂಖ್ಯೆ: ಎ2–ಸಿಬ್ಬಂದಿ–ನೇಮಕಾತಿ–ಸಿಆರ್–18/2011–12 ದಿನಾಂಕ 27–06–2011**

## ಅರಣ್ಯ ವೀಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ

****

ಹುಣಸೂರು ವನ್ಯಜೀವಿ ವಿಭಾಗದಲ್ಲಿ 70 ಅರಣ್ಯ ವೀಕ್ಷಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಲುವಾಗಿ ಈ ಕಚೇರಿಯ ಸಂಖ್ಯೆ: ಎ2–ಸಿಬ್ಬಂದಿ–ನೇಮಕಾತಿ–ಸಿಆರ್–18/2011–12 ದಿನಾಂಕ 27–06–2011 ರಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿತ್ತು. ತದನಂತರ ಸರ್ಕಾರದ ಪತ್ರ ಸಂಖ್ಯೆ: ಅಪಜೀ 382 ಅಅಸೇ 2010 ದಿನಾಂಕ 25–06–2011 ರನ್ವಯ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ), ಬೆಂಗಳೂರು ಇವರ ಪತ್ರ ಸಂಖ್ಯೆ: ಬಿ9–ನೇಮಕಾತಿ–ವಿವ–4/2009–10 ದಿನಾಂಕ 27–06–2011 ರಲ್ಲಿ ಇನ್ನೂ 14 ಅರಣ್ಯ ವೀಕ್ಷಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಲುವಾಗಿ ಹೆಚ್ಚುವರಿಯಾಗಿ ಹಂಚಿಕೆ ಮಾಡಿರುತ್ತಾರೆ. ಆದ್ದರಿಂದ ದಿನಾಂಕ 27–06–2011 ರಂದು ಹೊರಡಿಸಲಾಗಿರುವ ಈ ಕಚೇರಿಯ ಅಧಿಸೂಚನೆಯ ಕ್ರಮ ಸಂಖ್ಯೆ 1.0 ರಲ್ಲಿ ತಿಳಿಸಿರುವ ಅರಣ್ಯ ವೀಕ್ಷಕ ಹುದ್ದೆ: ಒಟ್ಟು 70 ಹುದ್ದೆಗಳನ್ನು ಎಂಬುದರ ಬದಲಾಗಿ **84 ಹುದ್ದೆಗಳನ್ನು** ಎಂದು ತಿದ್ದುಪಡಿ ಮಾಡಲಾಗಿದೆ ಹಾಗೂ ಕ್ರಮ ಸಂಖ್ಯೆ: 1.1 ರಲ್ಲಿ ತಿಳಿಸಿದಂತೆ 70 ಹುದ್ದೆಗಳು ಎಂಬುದರ ಬದಲಿಗೆ **84 ಹುದ್ದೆಗಳು** ಎಂದೂ, ಕ್ರಮ ಸಂಖ್ಯೆ 1.2 ರಲ್ಲಿ ತಿಳಿಸಿರುವ 35 ಹುದ್ದೆಗಳನ್ನು ಎಂಬುದರ ಬದಲಿಗೆ **42 ಹುದ್ದೆಗಳನ್ನು** ಎಂದೂ ಮತ್ತು ಕ್ರಮ ಸಂಖ್ಯೆ 1.3 ರಲ್ಲಿ ತಿಳಿಸಿರುವ 35 ಹುದ್ದೆಗಳನ್ನು ಎಂಬುದರ ಬದಲಿಗೆ **42 ಹುದ್ದೆಗಳನ್ನು** ಎಂದೂ ತಿದ್ದುಪಡಿ ಮಾಡಿ ಆದೇಶಿಸಿದೆ.

ತಿದ್ದುಪಡಿ ಮಾಡಿದ ನಂತರ ಕ್ರಮ ಸಂಖ್ಯೆ 1.3 ರಲ್ಲಿ ಮೇಲೆ ತಿಳಿಸಿರುವ **42 ಹುದ್ದೆಗಳ** ಮೀಸಲಾತಿ ವರ್ಗೀಕರಣವು ಈ ಕೆಳಗಿನಂತೆ ಇರುತ್ತದೆ:–

| ಪ್ರವರ್ಗ | ಸಮತಳ ಮೀಸಲಾತಿ | | | | | | ಒಟ್ಟು |
|---|---|---|---|---|---|---|---|
| | ಇತರೆ | ಮಾಜಿ ಸೈನಿಕ | ಅಂಗವಿಕಲ ಅಭ್ಯರ್ಥಿ (ಕುಷ್ಠರೋಗದಿಂದ ಗುಣ ಮುಖರಾಗಿರುವವರು ಮಾತ್ರ) | ಯೋಜನೆಗಳಿಂದ ನಿರಾಶ್ರಿತಗೊಂಡ ಕುಟುಂಬದ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ | |
| ಪರಿಶಿಷ್ಟ ಜಾತಿ | 4 | – | – | – | 2 | – | 6 |
| ಸಾಮಾನ್ಯ ಅರ್ಹತೆ | 10 | 2 | 2 | 1 | 5 | 1 | 21 |
| ಪರಿಶಿಷ್ಟ ಪಂಗಡ | 1 | – | – | – | – | – | 1 |
| ಪ್ರವರ್ಗ–I | 1 | – | – | – | – | – | 1 |
| ಪ್ರವರ್ಗ–II(ಎ) | 5 | – | – | – | 2 | – | 7 |
| ಪ್ರವರ್ಗ–II(ಬಿ) | 2 | – | – | – | – | – | 2 |
| ಪ್ರವರ್ಗ–III(ಎ) | 2 | – | – | – | – | – | 2 |
| ಪ್ರವರ್ಗ–III(ಬಿ) | 2 | – | – | – | – | – | 2 |
| ಒಟ್ಟು: | 27 | 2 | 2 | 1 | 9 | 1 | 42 |

ಉಳಿದಂತೆ ದಿನಾಂಕ 27–06–2011ರ ಈ ಕಚೇರಿಯ ಅಧಿಸೂಚನೆಯಲ್ಲಿ ನಮೂದಿಸಲ್ಪಟ್ಟಿರುವ ಎಲ್ಲಾ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಸಹಿ/–

**ಅರಣ್ಯ ಸಂರಕ್ಷಣಾಧಿಕಾರಿ**
**ಮತ್ತು ಆಯ್ಕೆ ಪ್ರಾಧಿಕಾರ**
**ಮೈಸೂರು ವೃತ್ತ, ಮೈಸೂರು.**

ಮೈಸೂರು,
ದಿನಾಂಕ: 01–07–2011.